(ರೂ. ಲಕ್ಷಗಳಲ್ಲಿ)

ಕ್ರಮ ಸಂಖ್ಯೆ	ಕಾಮಗಾರಿ ಹೆಸರು	ಶಿಗ್ಗಾಂವ್		ಸವಣೂರು	
		ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ಸಂಖ್ಯೆ	ಖರ್ಚು	ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ಸಂಖ್ಯೆ	ಖರ್ಚು
1.	ರಸ್ತೆ ಕಾಮಗಾರಿ	20	40.630	20	41.451
2.	ಚಿಕ್ಕ ನೀರಾವರಿ	17	15.620	10	12.214
3.	ಶಾಲಾ ಕಟ್ಟಡಗಳು	30	14.362	30	11.900
4.	ಅಂಗನವಾಡಿ ಕಟ್ಟಡಗಳು	8	11.160	8	6.775
5.	ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳು	2	2.128	3	5.068
6.	ಅರಣ್ಯ ಕಾಮಗಾರಿಗಳು	9	1.470	6	1.152
	ಒಟ್ಟು :	86	85.370	77	78.560

ವಿಷಯ: ಸೋಮವಾರ ಪೇಟೆ ತಾಲ್ಲೂಕಿನ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಉಪನ್ಯಾಸಕರ ಮತ್ತು ನೌಕರರ ಕೊರತೆ.

970 (1403)

ಶ್ರೀ ಡಿ.ಎನ್.ಮಾದಪ್ಪ (ಮಡಿಕೇರಿ): ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಸೋಮವಾರಪೇಟೆ ತಾಲ್ಲೂಕಿನ ಕುಶಾಲನಗರದ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಖಾಲಿ ಇರುವ ಉಪನ್ಯಾಸಕರು ಮತ್ತು ನೌಕರ ವರ್ಗದ ಸಂಖ್ಯೆ ಎಷ್ಟು?

ಆ) ಸರ್ಕಾರಿ ಪಾಲಿಟೆಕ್ನಿಕ್ ಕುಶಾಲನಗರ ಇಲ್ಲಿ ಸೂಕ್ತ ಯಂತ್ರ ಉಪಕರಣಗಳು ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):

ಅ) ಉಪನ್ಯಾಸಕರು : 06

ನೌಕರ ಸಿಬ್ಬಂದಿ : 29

ಆ) ಬಂದಿದೆ.

ಇ) ಉಪನ್ಯಾಸಕರ ಖಾಲಿ ಹುದ್ದೆಗಳನ್ನು ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಇತರ ಬೋಧಕೇತರ ನೌಕರರ ವರ್ಗದ ಖಾಲಿ ಹುದ್ದೆಗಳನ್ನು ಪ್ರಸಕ್ತ ಸಾಲಿನ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಸಾಧ್ಯವಾದಷ್ಟು ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಈಗಾಗಲೇ ವಿದ್ಯುತ್ ಯಾಂತ್ರಿಕ ಸ್ವಯಂ ಚಾಲಕ ವಿಭಾಗಗಳಿಗೆ ಉಪಕರಣಗಳನ್ನು ಸರಬರಾಜು ಮಾಡಲಾಗಿದೆ.

ವಿಷಯ: ಕೊಡಗು ಜಿಲ್ಲೆಯಲ್ಲಿ ಕೊಳವೆ ಬಾವಿ ದುರಸ್ಥಿಗೊಳಿಸುವುದು.

971 (1402)

ಶ್ರೀ ಡಿ.ಎಸ್.ಮಾದಪ್ಪ (ಮಡಿಕೇರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಕೊಳವೆ ಬಾವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

ಆ) ಇವುಗಳಲ್ಲಿ ಉಪಯೋಗವಿಲ್ಲದೆ ಕೆಟ್ಟುನಿಂತಿರುವ ಕೊಳವೆಬಾವಿಗಳೆಷ್ಟು? (ತಾಲ್ಲೂಕುವಾರು ವಿವರ ಒದಗಿಸುವುದು)

ಇ) ಇವುಗಳ ದುರಸ್ತಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಈ) ಒಂದು ಕೊಳವೆ ಬಾವಿ ತೆಗೆಯಲು ಆಗುವ ವೆಚ್ಚವೆಷ್ಟು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ ಮತ್ತು ಆ) ತಾಲ್ಲೂಕುವಾರು ವಿವರಗಳು ಈ ಕೆಳಗಿನಂತಿವೆ: